ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಸೋಮವಾರ, ದಿನಾಂಕ: ೨೯ನೇ ಜೂನ್, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಪರಿಶಿಷ್ಟ ಜಾತಿ ಅಭಿವೃದ್ಧಿ ನಿಗಮದ ಸವಲತ್ತುಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೦೧ (೧೩೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಗೆ ಪರಿಶಿಷ್ಟ ಜಾತಿ ಅಭಿವೃದ್ಧಿ ನಿಗಮದ ವತಿಯಿಂದ ೨೦೧೩–೧೪, ೨೦೧೪–೧೫ನೇ ಸಾಲಿನವರೆಗೆ ನಿಗದಿಪಡಿಸಿದ ಗುರಿಯೆಷ್ಟು;

(ಆ) ನಿಗದಿಪಡಿಸಿದ ಗುರಿ ಅನ್ವಯ ಪ್ರಗತಿಯನ್ನು ಸಾಧಿಸಲಾಗಿದೆಯೇ ; (ವಿವರ ನೀಡುವುದು)

(ಇ) ೨೦೧೩ನೇ ಸಾಲಿನಿಂದ ಇಲ್ಲಿಯವರೆಗೂ ತಾಲ್ಲೂಕು ಮಟ್ಟದ ಸಮಿತಿಯಿಂದ ನೇರಸಾಲ, ಮೈಕ್ರೋ ಕ್ರೆಡಿಟ್ ಸಾಲ, ಸ್ವಯಂ ಉದ್ಯೋಗ ಹಾಗೂ ಉದ್ಯಮ ಶೀಲ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸದೇ ಇರಲು ಕಾರಣವೇನು ;

(ಈ) ೨೦೧೩–೧೪ನೇ ಮತ್ತು ೨೦೧೪–೧೫ನೇ ಸಾಲಿನಲ್ಲಿ ಸವಲತ್ತುಗಳಿಂದ ಫಲಾನುಭವಿಗಳು ವಂಚಿತರಾಗಿರುವುದಕ್ಕೆ ಹೊಣೆ ಯಾರು ; ಮತ್ತು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

**ಹಾವೇರಿ ನಗರದ ಹೊಸ ಬಸ್ ನಿಲ್ದಾಣದ ಕಟ್ಟಡ ಕಾಮಗಾರಿ ಬಗ್ಗೆ**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೦೨ (೬೮) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ನಗರದಲ್ಲಿ ಹೊಸ ಬಸ್ ನಿಲ್ದಾಣದ ಕಟ್ಟಡವನ್ನು ಕಟ್ಟುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸದರಿ ಕಟ್ಟಡದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗಿದೆ; ಯಾವಾಗ ಮುಕ್ತಾಯಗೊಳಿಸಲಾಗುವುದು ; ಈ ಬಸ್ ನಿಲ್ದಾಣದ ಕಟ್ಟಡ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ;

(ಇ) ಈ ಕಾಮಗಾರಿಯು ನಿಗದಿತ ಅವಧಿಯೊಳಗೆ ಮುಕ್ತಾಯಗೊಳ್ಳದಿರಲು ಕಾರಣವೇನು ?

**ಪ್ರಾಥಮಿಕ ಆರೋಗ್ಯ ಕೇಂದ್ರಗಳ, ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳ ಕುರಿತು**

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೦೩ (೮೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ; ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಲಿ ಎಷ್ಟು ಜನ ವೈದ್ಯರು ಕಾರ್ಯ ನಿರ್ವಹಿಸುತ್ತಿರುವರು ; (ವಿವರ ನೀಡುವುದು)

(ಇ) ಸರಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ನಿಜವೇ ; ಹಾಗಿದ್ದಲ್ಲಿ, ವೈದ್ಯರನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ನೇಮಕಾತಿ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ? (ವಿವರ ನೀಡುವುದು)

## ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಕೊರೆದ ಕೊಳವೆ ಬಾವಿಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪ (೮೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೨–೧೩, ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಕೊರೆಯಲು ನಿಗದಿಪಡಿಸಿದ ಒಟ್ಟು ಕೊಳವೆ ಬಾವಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು) ಸದರಿ ಸಾಲಿನಲ್ಲಿ ನಿಗಮವು ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸಾಲಿನಲ್ಲಿ ಕೊರೆದ ಕೊಳವೆ ಬಾವಿಗಳಿಗೆ ಅಳವಡಿಸಿದ ಒಟ್ಟು ಪಂಪ್ ಸೆಟ್‌ಗಳ ಸಂಖ್ಯೆ ಎಷ್ಟು : (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಸಾಲಿನಲ್ಲಿ ಕೊರೆದ ಕೊಳವೆ ಬಾವಿಗಳಿಗೆ ವಿದ್ಯುಧೀಕರಣಗೊಳಿಸಿದ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಬಿಪಿಎಲ್ ಕಾರ್ಡುಗಳ ಸಂಖ್ಯೆಯ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫ (೮೦) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕಾರ್ಡುದಾರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿ.ಪಿ.ಎಲ್. ಕಾರ್ಡು ನೀಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಬಿ.ಪಿ.ಎಲ್. ಕಾರ್ಡುಗಳನ್ನು ಬಡತನ ರೇಖೆಗಿಂತ ಕೆಳಗಿರುವ ವರ್ಗದವರಿಗೆ ನೀಡಿದ್ದು, ಹಲವು ಗ್ರಾಮಗಳಲ್ಲಿ ಅನರ್ಹ ಫಲಾನುಭವಿಗಳು ಬಿ.ಪಿ.ಎಲ್. ಕಾರ್ಡುಗಳನ್ನು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹ ಕಾರ್ಡುದಾರರ ಮೇಲೆ ಸರ್ಕಾರವು ಯಾವ ರೀತಿಯ ಕ್ರಮ ಕೈಗೊಂಡಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಡೆಂಗ್ಯೂಜ್ವರ ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೦೬ (೧೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಈ ವರ್ಷ ಅಕಾಲಿಕ ಮಳೆಯಿಂದ ಈಗಾಗಲೇ ಡೆಂಗ್ಯೂ ಜ್ವರದಿಂದ ನಗರದಲ್ಲಿ ನೂರಾರು ಜನರು ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈವರೆಗೆ ರಾಜ್ಯದಲ್ಲಿ ಡೆಂಗ್ಯೂ ಜ್ವರದಿಂದ ಪೀಡಿತರಾದ ರೋಗಿಗಳ ಸಂಖ್ಯೆ ಎಷ್ಟು ;

(ಇ) ಈ ಡೆಂಗ್ಯೂ ಜ್ವರದ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮ ಮತ್ತು ಚಿಕಿತ್ಸೆಗಾಗಿ ಬಿಡುಗಡೆ ಮಾಡಲಾದ ಹಣವೆಷ್ಟು ?

## ಬೆಳಗಾವಿಯಲ್ಲಿ ಮಹಿಳಾ ಹಾಸ್ಟೆಲ್‌ಗಳ ಕೊರತೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೦೭ (೦೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) Education Hub ಎಂದು ಖ್ಯಾತಿಗಳಿಸಿರುವ ಬೆಳಗಾವಿ ನಗರದಲ್ಲಿ ಸರ್ಕಾರಿ ಶಾಲಾ ಕಾಲೇಜುಗಳು, ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚಿದ್ದು, ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಬಯಸುವ ವಿದ್ಯಾರ್ಥಿಗಳ ಬೇಡಿಕೆಯ ಅನುಪಾತಗಳಿಗೆ ಅನುಗುಣವಾಗಿ ಹಾಸ್ಟೆಲ್‌ಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಸ್ಟೆಲ್‌ಗೆ ಪರ್ಯಾಯವಾಗಿ ರೂಪಿಸಿರುವ 'ವಿದ್ಯಾಸಿರಿ ಯೋಜನೆ' ಪ್ರಚಾರದ ಕೊರತೆಯಿಂದ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗದೆ, ತೀವ್ರ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿಯಲ್ಲಿ ಮಹಿಳಾ ಹಾಸ್ಟೆಲ್‌ಗಳ ಬೇಡಿಕೆ ಬಹು ದಿನಗಳಿಂದ ಬಾಕಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಮೇಲಿನ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು ; ಎಷ್ಟು ಹಾಸ್ಟೆಲ್‌ಗಳನ್ನು ಮಂಜೂರು ಮಾಡಲು ಸರ್ಕಾರ ಉದ್ದೇಶಿಸಿದೆ ? (ವಿವರ ಒದಗಿಸುವುದು)

**ಐ.ಸಿ.ಯು.ಗಳ ಕುರಿತು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೦೮ (೧೧೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ತೀವ್ರ ನಿಗಾ ಘಟಕ (ಐ.ಸಿ.ಯು.) ಹೊಂದಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು ;

(ಆ) ಪ್ರತಿ ತೀವ್ರ ನಿಗಾ ಘಟಕಗಳಲ್ಲಿರುವ ಹಾಸಿಗೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ತೀವ್ರ ನಿಗಾ ಘಟಕಗಳು ರೋಗಿಗಳ ಅನುಪಾತಕ್ಕೆ ಅನುಗುಣವಾಗಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೋಗಿಗಳ ಅನುಪಾತಕ್ಕನುಗುಣವಾಗಿ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲು ಇರುವ ತೊಂದರೆಗಳೇನು ?

**ಬಾಳೆಬರೆ ಘಾಟ್ ರಸ್ತೆಯ ಮೂಲಕ ಸಂಚರಿಸುವ ಖಾಸಗಿ, ಸರ್ಕಾರಿ ಬಸ್ಸುಗಳ ಕುರಿತು**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೦೯ (೨೦) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳ ಗಡಿ ಪ್ರದೇಶವಾದ ಬಾಳೆಬರೆ ಘಾಟ್ ರಸ್ತೆಯ ಮೂಲಕ ಸಂಚರಿಸುವ ಖಾಸಗಿ ಮತ್ತು ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು ; (ಬಸ್ಸುಗಳ ನೊಂದಣಿ ಸಂಖ್ಯೆ, ಪರವಾನಿಗೆದಾರರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಮಾರ್ಗದಲ್ಲಿ ಸಂಚರಿಸುತ್ತಿರುವ ಸರ್ಕಾರಿ ಬಸ್ಸುಗಳು ಲಾಭದಾಯಕವಾಗಿ ಸಂಚರಿಸುತ್ತಿದ್ದರೂ ಸಹ. ಸದರಿ ಬಸ್ಸುಗಳನ್ನು ಆಗಾಗ್ಗೆ ರದ್ದುಗೊಳಿಸುವ ಉದ್ದೇಶವೇನು ;

(ಇ) ಖಾಸಗಿಯವರ ಪ್ರಭಾವದಲ್ಲಿ ಸರ್ಕಾರಿ ಬಸ್ಸುಗಳು ಸಂಚರಿಸುತ್ತಿವೆ ಎನ್ನುವ ಜನಾಭಿಪ್ರಾಯ ಮೂಡದಂತೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹುಬ್ಬಳ್ಳಿಯ ನಿರ್ದೇಶಕರ ಹುದ್ದೆಯ ವಿದ್ಯಾರ್ಹತೆ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೦ (೨೫) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ ಹುಬ್ಬಳ್ಳಿಯಲ್ಲಿ ಪ್ರಸ್ತುತವಿರುವ ನಿರ್ದೇಶಕರು ಯಾರು ಮತ್ತು ಅವರ ವಿದ್ಯಾರ್ಹತೆ ಏನು :

(ಆ) ಇವರು ಪಡೆದಿರುವ ಎಂ.ಡಿ. ಪದವಿಯು ಭಾರತೀಯ ವೈದ್ಯಕೀಯ ಮಂಡಳಿಯಿಂದ ಮಾನ್ಯತೆ ಪಡೆದಿದೆಯೇ ; ಹಾಗಿದ್ದರೆ, ಅದರ ಅಧಿಕೃತ ಪ್ರತಿ ನೀಡುವುದು ;

(ಇ) ಇವರು ಪಡೆದಿರುವ ಎಂ.ಡಿ. ಪದವಿಯು ಕರ್ನಾಟಕ ಮೆಡಿಕಲ್ ಕೌನ್ಸಿಲ್‌ನಲ್ಲಿ ನೋಂದಣಿ ಮಾಡಿದ್ದು ಯಾವಾಗ ; ಅದರ ಅಧಿಕೃತ ಪ್ರತಿ ನೀಡುವುದು ;

(ಈ) ಇವರು ತಮ್ಮ ಸೇವಾವಧಿಯಲ್ಲಿ ೨೦೦೮–೦೯ರಲ್ಲಿ ಗಳಿಕೆ ರಜೆ ಮತ್ತು ವೇತನ ರಹಿತ ರಜೆಯ ಮೇಲೆ East-Timor ಗೆ ಹೋಗಿ ಅಲ್ಲಿನ ಆರೋಗ್ಯ ಸಚಿವಾಲಯದಲ್ಲಿ ಎಚ್‌ಐವಿ ಮತ್ತು ಏಡ್ಸ್‌ನ ಸಲಹೆಗಾರರಾಗಿ ಕಾರ್ಯ ನಿರ್ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯ ಸರ್ಕಾರಿ ಸೇವೆಯಲ್ಲಿರುವವರು ಸರ್ಕಾರದ ಅನುಮತಿ ಇಲ್ಲದೆ ಹೀಗೆ ವಿದೇಶಕ್ಕೆ ಹೋಗಿ ಸೇವೆ ಸಲ್ಲಿಸಲು ಅವಕಾಶವಿದೆಯೇ ;

(ಉ) ಪ್ರಸ್ತುತವಿರುವ ವೈದ್ಯಕೀಯ ನಿರ್ದೇಶಕರ ವಿದ್ಯಾರ್ಹತೆಯ ಕುರಿತು ಕರ್ನಾಟಕ ಮೆಡಿಕಲ್ ಕೌನ್ಸಿಲ್‌ನ ಅಭಿಪ್ರಾಯವೇನು ; ಸದರಿಯುವರು ಸೆಪ್ಟೆಂಬರ್–೧೯೯೫ರಲ್ಲಿ ಮೈಸೂರು ವಿಶ್ವವಿದ್ಯಾಲಯದಡಿಯಲ್ಲಿ ಬರುವ ಮೈಸೂರು ವೈದ್ಯಕೀಯ ವಿದ್ಯಾಲಯದಿಂದ ಎಂ.ಡಿ. (ಕಮ್ಯುನಿಟಿ ಮೆಡಿಸಿನ್) ಪದವಿಯನ್ನು ಪಡೆದಿರುವುದಕ್ಕೆ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್‌ರವರು ೧೭ನೇ ಜನವರಿ–೧೯೯೧ರಲ್ಲಿಯೇ ಪ್ರಮಾಣ ಪತ್ರವನ್ನು ನೀಡಿರುವುದು ಸರಿಯೇ ;

(ಊ) ಸದರಿ ನಿರ್ದೇಶಕರು ಎಂ.ಡಿ. (ಕಮ್ಯುನಿಟಿ ಮೆಡಿಸಿನ್) ಪದವಿಯನ್ನು ಪಡೆದಿರುವ ಮೈಸೂರು ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಸೆಪ್ಟೆಂಬರ್–೧೯೯೯ ರಿಂದ ಎಂ.ಡಿ.ಪದವಿ ಮಾನ್ಯತೆ ಪಡೆದಿರುವುದಾಗಿ

ಭಾರತೀಯ ವೈದ್ಯಕೀಯ ಮಂಡಳಿಯ ವೆಬ್ ಸೈಟ್‌ನ ದಾಖಲೆಯಿಂದ ತಿಳಿದು ಬರುತ್ತಿದ್ದು.. ಅದಕ್ಕಿಂತ ಪೂರ್ವದಲ್ಲಿ ಇವರು ಸೆಪ್ಟೆಂಬರ್–೧೯೯೫ರಲ್ಲಿ ಎಂ.ಡಿ. (ಕಮ್ಯುನಿಟಿ ಮೆಡಿಸಿನ್) ಪದವಿಯನ್ನು ಪಡೆದಿರುವುದನ್ನು ಸರ್ಕಾರ ಒಪ್ಪುತ್ತದೆಯೇ ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಳಪೆ ವಸ್ತುಗಳನ್ನು ಖರೀದಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದಪವೀಧರರ ಕ್ಷೇತ್ರ) ಮತ್ತು**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧ (೯೯ & ೧೫೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೆ ಕಳೆದ ೩ ವರ್ಷಗಳಲ್ಲಿ ಎಷ್ಟೆಷ್ಟು ಮೊತ್ತದ ಹಾಸಿಗೆ, ದಿಂಬು ಇತ್ಯಾದಿ ವಸ್ತುಗಳನ್ನು ತೆಂಗು ಮತ್ತು ನಾರು ಅಭಿವೃದ್ಧಿ ಮಂಡಳಿಯಿಂದ ಖರೀದಿಸಲಾಗಿದೆ ;

(ಆ) ತುಂಬಾ ಕಳಪೆ ಗುಣಮಟ್ಟದ ವಸ್ತುಗಳನ್ನು ಖರೀದಿಸಿ, ಹೆಚ್ಚು ದರವನ್ನು ನೀಡಿ ವ್ಯಾಪಕ ಭ್ರಷ್ಟಾಚಾರವನ್ನು ಮಾಡಲಾಗಿದೆ ಎಂದು ದೂರುಗಳು ಬಂದಿರುವುದು ನಿಜವೇ ;

(ಇ) ಸದರಿ ಖರೀದಿಯಲ್ಲಿ ಪಾಲ್ಗೊಂಡಿರುವ ಅಧಿಕಾರಿಗಳು ಯಾರು ಯಾರು ;

(ಈ) ಈ ಅವ್ಯವಹಾರದ ಬಗ್ಗೆ ತನಿಖೆ ನಡೆಸಲು ಸರ್ಕಾರ ಈವರೆವಿಗೂ ವಿಫಲವಾಗಿದ್ದು, ತನಿಖೆ ಆರಂಭಿಸಲು ಕೈಗೊಳ್ಳುವ ಕ್ರಮಗಳೇನು ?

## ಮೊರಾರ್ಜಿ ಮತ್ತು ಕಿತ್ತೂರು ರಾಣಿ ವಸತಿ ಶಾಲೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೨ (೧೬೦) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಮೊರಾರ್ಜಿ ಹಾಗೂ ಕಿತ್ತೂರು ರಾಣಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಿಗೆ ಮಂಜೂರಾಗಿರುವ ಸಹ ಶಿಕ್ಷಕರ / ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇದುವರೆವಿಗೆ ಖಾಯಂ ನೇಮಕಗೊಂಡಿರುವ ಸಹ ಶಿಕ್ಷಕರ / ಪ್ರಾಂಶುಪಾಲರ ಸಂಖ್ಯೆ ಎಷ್ಟು ; ಸದರಿ ಸಹ ಶಿಕ್ಷಕರು / ಪ್ರಾಂಶುಪಾಲರು ಯಾವ ಸಾಲಿನಲ್ಲಿ ಖಾಯಂ ಆಗಿ ನೇಮಕಗೊಂಡಿರುತ್ತಾರೆ ;

(ಇ) ಯಾವ ಇಲಾಖೆಯ ನಿಯಮಾವಳಿಗಳ ಅಡಿಯಲ್ಲಿ ಇವರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ;

(ಈ) ಸದರಿ ಸಹ ಶಿಕ್ಷಕರು / ಪ್ರಾಂಶುಪಾಲರಿಗೆ ಪ್ರೊಬೆಷನರಿ ಪಿರಿಯಡ್, ವೇತನ ಬಡ್ತಿ, ಪಿಂಚಣಿ ಹಾಗೂ ಇತರೆ ಸವಲತ್ತುಗಳನ್ನು ನೀಡಲಾಗಿದೆಯೇ;

(ಉ) ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರನ್ನು ಖಾಯಂಗೊಳಿಸುವಂತೆ ರಾಜ್ಯ ಉಚ್ಛ ನ್ಯಾಯಾಲಯ ತೀರ್ಪು ನೀಡಿದೆಯೇ;

(ಊ) ನ್ಯಾಯಾಲಯದ ಆದೇಶದ ಮೇರೆಗೆ ಖಾಯಂಗೊಳಿಸುತ್ತಿರುವ ಸಹ ಶಿಕ್ಷಕರ/ ಪ್ರಾಂಶುಪಾಲರ ನೇಮಕಾತಿಯಲ್ಲಿನ ಸೇವಾ ಜೇಷ್ಠತೆ ಪರಿಗಣಿಸುವಲ್ಲಿ ಗೊಂದಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಹಾಗಿದ್ದಲ್ಲಿ, ಈ ಗೊಂದಲ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಎ) ಸದರಿ ನ್ಯಾಯಾಲಯದ ಆದೇಶದ ಸಂಬಂಧ ಇದುವರೆವಿಗೆ ಎಷ್ಟು ಮಂದಿ ಸಹ ಶಿಕ್ಷಕರು / ಪ್ರಾಂಶುಪಾಲರನ್ನು ಖಾಯಂಗೊಳಿಸಲಾಗಿದೆ ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಅನುದಾನದ ವಿಳಂಬದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩ (೧೪೪) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡುವ ಅನುದಾನದ ಅನುಷ್ಠಾನ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೨–೧೩, ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು, ಶಾಸಕರು ನೀಡಿರುವ ಅನುದಾನ, ಪಡೆದ ದಿನಾಂಕ, ಮೊತ್ತ, ಕಾಮಗಾರಿಗಳ ವಿವರ, ಅನುಷ್ಠಾನಗೊಳಿಸಿದ ದಿನಾಂಕಗಳ ವಿವರ ನೀಡುವುದು ;

(ಇ) ಶಾಸಕರ ಅನುದಾನ ಲಭ್ಯವಿರುವುದರಿಂದ ಆಧ್ಯತೆ ಮೇಲೆ ಅನುಷ್ಠಾನಗೊಳಿಸಲು ಇರುವ ಅನಾನುಕೂಲಗಳಾವುವು ;

(ಈ) ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ತೊಂದರೆಯಾಗುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪ (೧೧೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆಸ್ಪತ್ರೆಗಳಲ್ಲಿ, ತಾಲ್ಲೂಕು ಆಸ್ಪತ್ರೆಗಳಲ್ಲಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮಂಜೂರಾದ ಹುದ್ದೆಗಳು ಎಷ್ಟು ;

(ಇ) ಮಂಜೂರಾದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಈ) ಬೆಳಗಾವಿ ಜಿಲ್ಲೆ ಚಿಕ್ಕೋಡಿ, ಹುಕ್ಕೇರಿ, ಅಥಣಿ ಮತ್ತು ಗೋಕಾಕ ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಹೆಚ್ಚಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗುವುದು ?

## ವಿದ್ಯಾಸಿರಿ ಯೋಜನೆಯ ಕುರಿತು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫ (೧೩೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ "ವಿದ್ಯಾಸಿರಿ" ವಿದ್ಯಾರ್ಥಿ ವೇತನ ಯೋಜನೆ ಅಡಿಯಲ್ಲಿ ಈವರೆವಿಗೆ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಈ ಯೋಜನೆಯಡಿಯಲ್ಲಿ ವೇತನವನ್ನು ನೀಡಲು ಇಲಾಖೆಯು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಈ ಯೋಜನೆಯ ಲಾಭವನ್ನು ಪಡೆಯಲು ಎಲ್ಲಾ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆಯೇ ; ಇಲ್ಲಿಯವರೆವಿಗೆ ಈ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿರುವ ಎಷ್ಟು ವಿದ್ಯಾರ್ಥಿಗಳಿಗೆ ಎಷ್ಟು ಹಣವನ್ನು ನೀಡಲಾಗಿದೆ ;

(ಈ) ಈ ಯೋಜನೆಯಡಿಯಲ್ಲಿ ಇಲ್ಲಿಯವರೆವಿಗೆ ಎಷ್ಟು ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ ? (ವಿವರಗಳನ್ನು ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 233, ಪ್ರತಿಗಳು 1500